## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 444 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 19.02.2024 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದಲ್ಲಿ ಎಷ್ಟು ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಜೀವನೋಪಾಯಕ್ಕಾಗಿ ಕೇಂದ್ರಗಳು ಸ್ಥಾಪಿತವಾಗಿವೆ; ಅವುಗಳ ವಿವರ ನೀಡುವುದು; | ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಯಾವುದೇ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಕೇಂದ್ರಗಳನ್ನು ಸ್ಥಾಪಿಸಲಾಗಿರುವುದಿಲ್ಲ.<br>ಆದರೆ ರಾಜ್ಯದಲ್ಲಿ 35 ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರಗಳು, 270 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಹಾಗೂ 8 ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆಗಳನ್ನು ಸ್ಥಾಪಿಸಲಾಗಿದೆ. |
| (ಆ) ಸರ್ಕಾರ ನಿರುದ್ಯೋಗಿ ವಿದ್ಯಾರ್ಥಿಗಳಿಗೆ ಅನುಕೂಲವಾಗಲೆಂದು ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರ ಸ್ಥಾಪನೆ ಮಾಡಲು ತೆಗೆದುಕೊಂಡ ಯೋಜನೆ ಸ್ವಾಗತಾರ್ಹವಾಗಿದ್ದು, ಈ ಕೇಂದ್ರಗಳು ಪ್ರಸ್ತುತ ಎಷ್ಟು ಪ್ರಾರಂಭದ ಸ್ಥಿತಿಯಲ್ಲಿವೆ ಮತ್ತು ಎಷ್ಟು ಕೌಶಲ್ಯ ಅಭಿವೃದ್ಧಿ ಕೇಂದ್ರಗಳನ್ನು ಪ್ರಾರಂಭ ಮಾಡುವ ಯೋಜನೆ ಸರ್ಕಾರದ ಮುಂದಿದೆ; | ಉದ್ಭವಿಸುವುದಿಲ್ಲ. |
| (ಇ) ಈ ಕೇಂದ್ರಗಳು ತಾಲ್ಲೂಕು ಕೇಂದ್ರಗಳಲ್ಲಿ ಪ್ರಾರಂಭಿಸಬೇಕೆನ್ನುವ ಯೋಜನೆ ಇರುವುದು ನಿಜವೇ; ಹಾಗಿದ್ದಲ್ಲಿ ಇನ್ನುಳಿದ ತಾಲ್ಲೂಕುಗಳಲ್ಲಿ ಈ ಕೇಂದ್ರಗಳನ್ನು ಪ್ರಾರಂಭಿಸುವುದು ಯಾವಾಗ? (ವಿವರ ನೀಡುವುದು) | ಉದ್ಭವಿಸುವುದಿಲ್ಲ. |

ಸಂಖ್ಯೆ: ಕೌಉಜೀಇ 04 ಕೌಗುಪ್ರ 2024

**(ಡಾ. ಶರಣಪ್ರಕಾಶ ಆರ್ ಪಾಟೀಲ್)**
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.